ಕರ್ನಾಟಕ ಸರ್ಕಾರ

ಸಂಖ್ಯೆ: ನಅಇ 361 ಬೆಮಪ್ರಾ 2013

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ,
ಬೆಂಗಳೂರು, ದಿನಾಂಕ: 18.06.2014

## ಸುತ್ತೋಲೆ

ವಿಷಯ: ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2) ರಡಿ ಮಹಾಯೋಜನೆಗಳಲ್ಲಿ ಉದ್ಯಾನವನ / ಬಯಲು ಜಾಗ ಹಾಗೂ ಸಾರ್ವಜನಿಕ /ಅರೆ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಮೀನುಗಳ ಭೂ ಉಪಯೋಗ ಬದಲಾವಣೆ ಕುರಿತು

ಉಲ್ಲೇಖ:1)ಸರ್ಕಾರದ ಸುತ್ತೋಲೆ ಸಂಖ್ಯೆ ನಅಇ 66 ಮೈಅಪ್ರಾ 2010, ದಿ:06.03.2010
2)ಸರ್ಕಾರದ ಸುತ್ತೋಲೆ ಸಂಖ್ಯೆ ನಅಇ 91 ಮೈಅಪ್ರಾ 2012, ದಿ:25.02.2012

*****

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(1)ರನ್ವಯ ರಾಜ್ಯದ ನಗರ ಪ್ರದೇಶಗಳಲ್ಲಿ ಸಂಬಂಧಿಸಿದಂತೆ ರೂಪಿಸಲಾಗಿರುವ ಮಹಾಯೋಜನೆಗಳಲ್ಲಿ ಅಗತ್ಯಕ್ಕೆ ತಕ್ಕಂತೆ ಹಲವಾರು ಪ್ರದೇಶಗಳನ್ನು ಉದ್ಯಾನವನ ಮತ್ತು ಬಯಲು ಜಾಗ ಹಾಗೂ ಸಾರ್ವಜನಿಕ/ಅರೆ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಮೀನುಗಳನ್ನು ಮಹಾಯೋಜನೆಯು ಜಾರಿಗೆ ಬಂದ ದಿನಾಂಕದಿಂದ 05 ವರ್ಷಗಳ ಕಾಲಮಿತಿಯೊಳಗೆ ಸದರಿ ಉದ್ದೇಶಕ್ಕಾಗಿ ಉಪಯೋಗಿಸಲು ಸಂಬಂಧಪಟ್ಟ ಪ್ರಾಧಿಕಾರಗಳು ಭೂ ಸ್ವಾಧೀನಪಡಿಸಿಕೊಂಡು ಸದರಿ ಜಮೀನುಗಳ ಭೂ ಮಾಲೀಕರುಗಳಿಗೆ ಪರಿಹಾರ ಧನವನ್ನು ನೀಡಬೇಕಾಗಿರುತ್ತದೆ. ಒಂದು ವೇಳೆ ನಿಗದಿತ 5 ವರ್ಷಗಳ ಕಾಲಮಿತಿಯೊಳಗಾಗಿ ಭೂ ಸ್ವಾಧೀನ ಪ್ರಕ್ರಿಯೆ ಕೈಗೊಳ್ಳದ ಜಮೀನುಗಳ ಭೂ ಮಾಲೀಕರುಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2)ರನ್ವಯ ಅವರು ಅಪೇಕ್ಷಿಸುವ ಉದ್ದೇಶಕ್ಕೆ ಅಂತಹ ಜಮೀನುಗಳನ್ನು ಉಪಯೋಗಿಸಿಕೊಳ್ಳಲು ಹಕ್ಕುಳ್ಳವರಾಗಿರುತ್ತಾರೆ. ಅಲ್ಲದೇ ಈ ರೀತಿ ಮಹಾಯೋಜನೆಗಳಲ್ಲಿ ಜಮೀನುಗಳನ್ನು ನಿರ್ದಿಷ್ಠ ಉದ್ಯಾನವನ, ಬಯಲುಜಾಗ ಹಾಗೂ ಸಾರ್ವಜನಿಕ / ಅರೆಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿಟ್ಟಿರುವುದು ತಂತಾನೆ ರದ್ದಾಗುತ್ತದೆ. ಇಲ್ಲಿಯವರೆಗೂ ಯಾವುದೇ ಪ್ರಾಧಿಕಾರಗಳು ಇಂತಹ ಜಮೀನುಗಳನ್ನು ಭೂ ಸ್ವಾಧೀನಪಡಿಸಿಕೊಂಡಿರುವುದಿಲ್ಲ, ಆರ್ಥಿಕವಾಗಿ ಸಶಕ್ತವಾಗಿರುವುದಿಲ್ಲವೆಂಬ ಕಾರಣವೊಡ್ಡಿ ಭೂ ಸ್ವಾಧೀನಪಡಿಸಿಕೊಳ್ಳಲು ಸಾಧ್ಯವಾಗಿರುವುದಿಲ್ಲವೆಂದು ಸರ್ಕಾರಕ್ಕೆ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಗಳನ್ನು ಸಲ್ಲಿಸುತ್ತಿರುವುದನ್ನು ಗಮನಿಸಲಾಗಿದೆ.

ಉಲ್ಲೇಖ (1)ರಲ್ಲಿನ ಸುತ್ತೋಲೆ ಸಂಖ್ಯೆ ನಅಇ 66 ಮೈಅಪ್ರಾ 2010, ದಿ:06.03.2010ರಲ್ಲಿ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2)ರಡಿ ಮಹಾಯೋಜನೆಗಳಲ್ಲಿ ಉದ್ಯಾನವನ ಮತ್ತು ಬಯಲು ಜಾಗ ಹಾಗೂ ಸಾರ್ವಜನಿಕ/ಅರೆ ಸಾರ್ವಜನಿಕ ಉದ್ದೇಶಕ್ಕಾಗಿ ಕಾಯ್ದಿರಿಸಿರುವ ಜಮೀನುಗಳನ್ನು ಭೂ ಉಪಯೋಗ ಬದಲಾವಣೆ ಮಾಡಲು ಅನುಸರಿಸಬೇಕಾದ ಬಗ್ಗೆ ಸ್ಪಷ್ಟೀಕರಣವನ್ನು ನೀಡಲಾಗಿರುತ್ತದೆ. ಉಲ್ಲೇಖ (2)ರಲ್ಲಿನ ಸುತ್ತೋಲೆಯಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ ನಅಇ 66 ಮೈಅಪ್ರಾ 2010, ದಿ:06.03.2010ರಲ್ಲಿನ ಕ್ರ.ಸಂ 2 ರಿಂದ 4ರಲ್ಲಿ ಬರುವ ಅಂಶಗಳು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(2)ರನ್ವಯ ಕಾನೂನು ಬದ್ಧವಾಗಿರುವುದಿಲ್ಲ. ಆದ್ದರಿಂದ ಸದರಿ ಸುತ್ತೋಲೆಯನ್ನು ಹಿಂಪಡೆದು ಪ್ರಾಧಿಕಾರಗಳು ಇನ್ನು ಮುಂದೆ ಸದರಿ ಸುತ್ತೋಲೆಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬಾರದೆಂದು ಸೂಚಿಸಲಾಗಿದೆ.

ವಿವಿಧ ನಗರಾಭಿವೃದ್ಧಿ ಪ್ರಾಧಿಕಾರಗಳು ಉದ್ಯಾನವನ, ಬಯಲುಜಾಗ ಹಾಗೂ ಸಾರ್ವಜನಿಕ /ಅರೆಸಾರ್ವಜನಿಕ ವಲಯಕ್ಕೆ ಮೀಸಲಿರಿಸಲಾದ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳದೇ ಇರುವುದರಿಂದ ಭೂ ಮಾಲೀಕರು ಮಾನ್ಯ ಉಚ್ಚ ನ್ಯಾಯಾಲದಲ್ಲಿ ರಿಟ್ ಅರ್ಜಿಗಳನ್ನು ದಾಖಲಿಸಿದ್ದು, ಮಾನ್ಯ ಉಚ್ಚ ನ್ಯಾಯಾಲಯವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2) ರನ್ವಯ ಭೂ ಉಪಯೋಗ ಬದಲಾವಣೆಗೆ ಕ್ರಮ ಕೈಗೊಳ್ಳುವಂತೆ ಆದೇಶವನ್ನು ನೀಡಿರುತ್ತದೆ. ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ನ್ಯಾಯಾಲಯದಲ್ಲಿ ಈ ರೀತಿಯ ಹಲವಾರು ಪ್ರಕರಣಗಳು ದಾಖಲಾಗಿದ್ದು, ಮಾನ್ಯ ನ್ಯಾಯಾಲಯವು ಈಗಾಗಲೇ ನೀಡಿರುವ ತೀರ್ಪುಗಳನ್ನು ಗಮನದಲ್ಲಿಟ್ಟುಕೊಂಡು ಮಹಾಯೋಜನೆಯ ಉದ್ದೇಶದ ಸಫಲತೆ ಸಾಧ್ಯವಾಗುವಂತೆ ಒಂದು ಸಾಮಾನ್ಯ ತೀರ್ಮಾನ ತೆಗೆದುಕೊಳ್ಳುವುದು ಅತ್ಯಂತ ಅವಶ್ಯಕವಾಗಿರುತ್ತದೆ ಹಾಗೂ ಬೆಂಗಳೂರು ನಗರದ ಸ್ಥಳೀಯ ಯೋಜನಾ ಪ್ರದೇಶ ಮತ್ತು ರಾಜ್ಯದಲ್ಲಿನ ಇತರೆ ನಗರಗಳ ಸ್ಥಳೀಯ ಯೋಜನಾ ಪ್ರದೇಶದ ಮಹಾಯೋಜನೆಯಲ್ಲಿ ನಿಗಧಿಪಡಿಸಲಾದ ಸಾರ್ವಜನಿಕ ಉಪಯೋಗದ ಜಾಗಕ್ಕೆ ಸಂಬಂಧಿಸಿದಂತೆ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2) ರಡಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಮತ್ತು ಇತರೆ ಜಿಲ್ಲಾ ನ್ಯಾಯಾಲಯಗಳಲ್ಲಿ ದಾವೆಗಳು ದಾಖಲಾಗಿದ್ದು, ಸದರಿ ದಾವೆಗಳಿಗೆ ನ್ಯಾಯಾಲಯವು ನೀಡಿರುವ ತೀರ್ಪುಗಳನ್ನು ಹಾಗೂ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ 69(2)ಗೆ ಸಂಬಂಧಿಸಿದಂತೆ ಇಲ್ಲಿವರೆವಿಗೂ ಸರ್ಕಾರವು ಹೊರಡಿಸಿರುವ ಸುತ್ತೋಲೆಗಳನ್ನು ಪರಿಶೀಲಿಸಲಾಗಿ, ಮಹಾಯೋಜನೆಯಲ್ಲಿ ನಿಗಧಿಪಡಿಸಲಾದ ಭೂ ಉಪಯೋಗವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ 69(2)ರಡಿ ರದ್ದಾದ ಪ್ರಕರಣಗಳಿಗೆ ಸದರಿ ಕಾಯ್ದೆ ಕಲಂ 14(ಎ) ಅನ್ವಯಿಸುವುದಿಲ್ಲ. ಹಾಗಾಗಿ, ಇಂತಹ ಪ್ರಕರಣಗಳಲ್ಲಿ ಈ ಕೆಳಕಂಡ ಕಾರ್ಯವಿಧಾನವನ್ನು ಅನುಸರಿಸಿ ಭೂ ಉಪಯೋಗವನ್ನು ನಿಗಧಿಪಡಿಸಬೇಕಾಗುತ್ತದೆ.

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 69(2)ರನ್ವಯ ನಿಗಧಿತ ಅವಧಿಯಲ್ಲಿ ಉದ್ಯಾನವನ/ಬಯಲು ಜಾಗ ಹಾಗೂ ಸಾರ್ವಜನಿಕ/ಅರೆ ಸಾರ್ವಜನಿಕ ವಲಯ ಉದ್ದೇಶಕ್ಕೆ ಮೀಸಲಿಟ್ಟ ಜಮೀನುಗಳನ್ನು 5 ವರ್ಷದೊಳಗಾಗಿ ಭೂಸ್ವಾಧೀನಪಡಿಸಿಕೊಳ್ಳಲು ಕ್ರಮ ಕೈಗೊಳ್ಳಲಿದ್ದಲ್ಲಿ, ಅಂತಹ ಜಮೀನುಗಳನ್ನು ಜಮೀನುದಾರರಿಂದ ಪ್ರಾಧಿಕಾರಕ್ಕೆ/ ನಗರ ಯೋಜನಾ ಪ್ರಾಧಿಕಾರಗಳಿಗೆ ಭೂ ಉಪಯೋಗ ಬದಲಾವಣೆ ಕೋರಿ ಅರ್ಜಿ ಸಲ್ಲಿಸಿದ್ದಲ್ಲಿ, ಅಂತಹ ಪ್ರಸ್ತಾವನೆಗಳನ್ನು 15 ದಿನಗಳ ಕಾಲಾವಕಾಶ ನೀಡಿ ಪತ್ರಿಕಾ ಪ್ರಕಟಣೆ ಹೊರಡಿಸಿ ನಿಗಧಿತ ಅವಧಿಯಲ್ಲಿ ಸ್ವೀಕೃತವಾಗುವ ಸಲಹೆ/ ಆಕ್ಷೇಪಣೆಗಳನ್ನು ಪ್ರಾಧಿಕಾರದ ಸಭೆಯಲ್ಲಿ ಮಂಡಿಸಿ ಹಾಗೂ ಸುತ್ತಮುತ್ತಲಿನ ಬೆಳವಣಿಗೆಗಳನ್ನು ಗಣನೆಗೆ ತೆಗೆದುಕೊಂಡು ಹೊಸ ಭೂ ಉಪಯೋಗವನ್ನು ನಿಗಧಿಪಡಿಸಿ ಪ್ರಸ್ತಾವನೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಮೂಲಕ ಸರ್ಕಾರಕ್ಕೆ ಸಲ್ಲಿಸುವಂತೆ ತಿಳಿಸಲಾಗಿದೆ ಹಾಗೂ ಸರ್ಕಾರದ ಸುತ್ತೋಲೆ ಸಂಖ್ಯೆ: ನಅಇ 91 ಬೈಅಪ್ರಾ 2012, ದಿನಾಂಕ: 25.02.2012ನ್ನು ಹಿಂದಕ್ಕೆ ಪಡೆಯಲಾಗಿದೆ. ಹಾಗೂ ಈ ಸುತ್ತೋಲೆಯನ್ನು ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 76 (ಕೆ)ರಡಿಯಲ್ಲಿ ಹೊರಡಿಸಲಾಗಿದೆ.

(ಟಿ.ಎಂ. ವಾಸುದೇವ ರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

ಇವರಿಗೆ:

1. ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು
2. ಆಯುಕ್ತರು ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳು
3. ಸದಸ್ಯ ಕಾರ್ಯದರ್ಶಿ ಎಲ್ಲಾ ನಗರ ಯೋಜನಾ ಪ್ರಾಧಿಕಾರಗಳು
4. ಮುಖ್ಯಾಧಿಕಾರಿಗಳು ಎಲ್ಲಾ ಪುರಸಭೆ ಯೋಜನಾ ಪ್ರಾಧಿಕಾರಗಳು
5. ಎಲ್ಲಾ ನಗರ ಮತ್ತು ಗ್ರಾಮಾಂತರ ಯೋಜನಾ [illegible]

ಸಂ:ನಗ್ರಾಯೋ:ಜಂ.ನಿ:11:2014

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ,
ಬಹುಮಹಡಿಗಳ ಕಟ್ಟಡ, 4ನೇ ಹಂತ,
ಡಾ: ಅಂಬೇಡ್ಕರ್ ವೀದಿ, ಬೆಂಗಳೂರು,
ದಿನಾಂಕ: -5 JUL 2014

**ಯಥಾ ಪ್ರತಿಯನ್ನು ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ವಲಯ ಕಛೇರಿ, ಧಾರವಾಡ ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
2. ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು, ವಿಭಾಗೀಯ ಕಛೇರಿ, ಬೆಂಗಳೂರು, ಮೈಸೂರು ಮತ್ತು ಗುಲ್ಬರ್ಗಾ ಇವರಿಗೆ ಮಾಹಿತಿಗಾಗಿ ಕಳುಹಿಸಲಾಗಿದೆ.
3. ಇಲಾಖೆಯ ಎಲ್ಲಾ ಸಹಾಯಕ ನಿರ್ದೇಶಕರ ಕಛೇರಿಗಳಿಗೆ ಮಾಹಿತಿಗಾಗಿ.
4. ಕೇಂದ್ರ ಕಛೇರಿಯ ಅಧಿಕಾರಿ ಹಾಗೂ ತಾಂತ್ರಿಕ ಸಿಬ್ಬಂದಿಯವರಿಗೆ ಮಾಹಿತಿಗಾಗಿ ನೀಡಲಾಗಿದೆ.
5. ಕಛೇರಿ ಪ್ರತಿ.

Sheela. M.S
27/6/14

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಪರವಾಗಿ